ಕರ್ನಾಟಕ ಸರ್ಕಾರ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್

## ಸಂವಹನ ಮತ್ತು ಸಾಮರ್ಥ್ಯ ಅಭಿವೃದ್ಧಿ ಘಟಕ

ಸಂಖ್ಯೆ : ಗ್ರಾಅಪ/ಸಂ.ಸ್ವ.ಆಂ./103/2011-12/490 ದಿನಾಂಕ : 07.12.2012

**ರವರಿಗೆ,**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಎಲ್ಲಾ ಜಿಲ್ಲಾ ಪಂಚಾಯತ್.

ಮಾನ್ಯರೇ,

***ವಿಷಯ:*** ನಿರ್ಮಲ ಭಾರತ್ ಅಭಿಯಾನ ಕಾರ್ಯಕ್ರಮದಡಿ ಶಾಲಾ ಶೌಚಾಲಯದೊಂದಿಗೆ ಹಾಗೂ ಸಮುದಾಯ ಶೌಚಾಲಯ ನಿರ್ಮಾಣ ಮಾಡುವಾಗ ಬಯೋಗ್ಯಾಸ್ ಘಟಕವನ್ನು ಸ್ಥಾಪನೆ ಮಾಡುವ ಕುರಿತು.

***ಉಲ್ಲೇಖ:*** ದಿನಾಂಕ:17.9.2012 ರಂದು ನಡೆದ ಸಭೆಯ ನಡಾವಳಿಯಂತೆ.

- - -

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ **"ನಿರ್ಮಲ ಭಾರತ್ ಅಭಿಯಾನ"** ಕಾರ್ಯಕ್ರಮದಡಿ ದಿನಾಂಕ: 17.9.2012 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಿರ್ಮಲ ಭಾರತ ಅಭಿಯಾನ ಯೋಜನೆಯ 2012-13ನೇ ಸಾಲಿನ ಪರಿಷ್ಕೃತ ವಾರ್ಷಿಕ ಅನುಷ್ಠಾನ ಯೋಜನೆಯ ಸಭೆಯ ನಡಾವಳಿಯಂತೆ ಎಲ್ಲಾ ಶಾಲೆಗಳಿಗೆ ಶೌಚಾಲಯದೊಂದಿಗೆ ಬಯೋಗ್ಯಾಸ್ ಪ್ಲಾಂಟ್ ಸ್ಥಾಪನೆ ಮಾಡುವುದು ಅವಶ್ಯವಿದ್ದು ಹಾಗೂ ಸಮುದಾಯ ಶೌಚಾಲಯ ನಿರ್ಮಾಣ ಮಾಡುವಾಗ ಬಯೋಗ್ಯಾಸ್ ಘಟಕವನ್ನು ಸ್ಥಾಪನೆ ಮಾಡಲು ಪರಿಗಣಿಸುವಂತೆ ಅಭಿವೃದ್ಧಿ ಆಯುಕ್ತರು ಸೂಚಿಸಿದ್ದಾರೆ. ಈ ನಿಟ್ಟಿನಲ್ಲಿ ಮೇಲಿನಂತೆ ಕ್ರಮಕೈಗೊಳ್ಳಲು ಕೋರಲಾಗಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು,
ಸ್ವ-ಉದ್ಯೋಗ ಕಾರ್ಯಕ್ರಮಗಳು ಹಾಗೂ
ನಿರ್ಮಲ ಭಾರತ್ ಅಭಿಯಾನ
ಗ್ರಾ ಅ ಮತ್ತು ಪಂಚಾಯತ್ ರಾಜ್ ಇಲಾಖೆ

2ನೇ ಮಹಡಿ, ಕೆ.ಹೆಚ್.ಬಿ. ಬಿಲ್ಡಿಂಗ್, ಕಾವೇರಿಭವನ, ಬೆಂಗಳೂರು - 560 009.
ದೂರವಾಣಿ ಸಂ.22221861 : - ಫ್ಯಾಕ್ಸ್ :-22221862 E-mail : wsrdpr@gmail.com

ರವಾನಿಸಲಾಗಿದೆ No. 490 13.12.12